**Akashvani : Bangalore**
**National Bulletin In Kannada**
**25.09.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**25.09.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ಜಮ್ಮು-ಕಾಶ್ಮೀರ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ಮತದಾನ ಆರಂಭ

೨. ಹರಿಯಾಣದ ಸೋನಿಪಥ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಚುನಾವಣಾ ಸಭೆ

೩. ಪ್ರಧಾನಿ ನರೇಂದ್ರ ಮೋದಿ ಅಮೆರಿಕ ಪ್ರವಾಸ ಅತ್ಯಂತ ಪ್ರಭಾವಯುತ- ಎನ್‌ಡಿಎ ನಾಯಕರ ಶ್ಲಾಘನೆ

೪. ಎರಡನೇ ಆವೃತ್ತಿಯ ಉತ್ತರಪ್ರದೇಶ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನ ಉದ್ಘಾಟಿಸಲಿರುವ ಉಪರಾಷ್ಟ್ರಪತಿ

**<><*<><>*><>**

ಜಮ್ಮು ಮತ್ತು ಕಾಶ್ಮೀರದಲ್ಲಿ ಎರಡನೇ ಹಂತದಲ್ಲಿ ಇಂದು ೨೬ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾನ ಪ್ರಗತಿಯಲ್ಲಿದೆ. ಬೆಳಗ್ಗೆ ೭ ಗಂಟೆಗೆ ಮತದಾನ ಆರಂಭಗೊಂಡಿದ್ದು, ಸಂಜೆ ೬ ಗಂಟೆಗೆ ಮುಕ್ತಾಯವಾಗಲಿದೆ. ಹೆಚ್ಚಿನ ಸಂಖ್ಯೆಯ ಜನರು ಮತದಾನದ ಹಕ್ಕು ಚಲಾಯಿಸಲು ಸಾಧ್ಯವಾಗುವಂತೆ ವ್ಯಾಪಕ ಭದ್ರತಾ ವ್ಯವಸ್ಥೆ ಮಾಡಲಾಗಿದೆ. ಮುಕ್ತ, ನ್ಯಾಯಸಮ್ಮತ ಹಾಗೂ ಸುಗಮ ಮತದಾನವನ್ನು ಖಾತರಿಪಡಿಸಿಕೊಳ್ಳಲು ವೆಬ್‌ಕಾಸ್ಟಿಂಗ್ ಸೌಲಭ್ಯದೊಂದಿಗೆ ೧ ಸಾವಿರದ ೫೬ ನಗರ ಮತ್ತು ೨ ಸಾವಿರದ ೪೪೬ ಗ್ರಾಮೀಣ ಪ್ರದೇಶ ಸೇರಿದಂತೆ ೩ ಸಾವಿರದ ೫೦೨ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ನ್ಯಾಷನಲ್ ಕಾನ್ಫರೆನ್ಸ್ ನಾಯಕ, ಮಾಜಿ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಪ್ರದೇಶ ಕಾಂಗ್ರೆಸ್ ಮುಖ್ಯಸ್ಥ ತಾರಿಕ್ ಹಮೀದ್ ಕರ್ರಾ, ಜಮ್ಮು ಮತ್ತು ಕಾಶ್ಮೀರ ಬಿಜೆಪಿ ಅಧ್ಯಕ್ಷ ರವೀಂದರ್ ರೈನಾ ಮತ್ತು ಅಪ್ನಿ ಪಕ್ಷದ ಅಧ್ಯಕ್ಷ ಅಲ್ತಾಫ್ ಬುಖಾರಿ ಚುನಾವಣಾ ಕಣದಲ್ಲಿರುವ ಪ್ರಮುಖ ನಾಯಕರಾಗಿದ್ದು, ಅವರ ಚುನಾವಣಾ ಭವಿಷ್ಯ ಇಂದು ನಿರ್ಧಾರವಾಗಲಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಮೂರು ಹಂತಗಳಲ್ಲಿ ಚುನಾವಣೆ ನಡೆಯುತ್ತಿದೆ. ಮೂರನೇ ಹಂತದ ೪೦ ಸ್ಥಾನಗಳಿಗೆ ಅಕ್ಟೋಬರ್ ೧ ರಂದು ಮತದಾನ ನಡೆಯಲಿದ್ದು, ಅಕ್ಟೋಬರ್ ೮ ರಂದು ಮತ ಎಣಿಕೆ ನಡೆಯಲಿದೆ. ಸೆಪ್ಟೆಂಬರ್ ೧೮ ರಂದು ನಡೆದ ಮೊದಲ ಹಂತದ ವಿಧಾನಸಭಾ ಚುನಾವಣೆಯಲ್ಲಿ ಶೇಕಡಾ ೬೧ ರಷ್ಟು ಮತದಾನ ದಾಖಲಾಗಿತ್ತು.

**<><*<><>*><>**

ಹರಿಯಾಣ ರಾಜ್ಯ ವಿಧಾನಸಭಾ ಚುನಾವಣೆಗೆ ರಾಜಕೀಯ ಪಕ್ಷಗಳ ಪ್ರಚಾರ ಭರಾಟೆಯಿಂದ ಸಾಗುತ್ತಿದೆ. ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಹರಿಯಾಣದ ಸೋನಿಪಥ್ ಜಿಲ್ಲೆಯ ಗೋಹನಾದಲ್ಲಿ ಚುನಾವಣಾ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ರ್‍ಯಾಲಿಯ ಮೂಲಕ ಸೋನಿಪಥ್, ರೋಹ್‌ಟಕ್ ಹಾಗೂ ಪಾಣಿಪಥ್‌ನ ೨೨ ವಿಧಾನಸಭಾ ಕ್ಷೇತ್ರಗಳ ಮತದಾರರನ್ನು ಸೆಳೆಯಲು ಬಿಜೆಪಿ ಪ್ರಯತ್ನಿಸಲಿದೆ. ಪ್ರಧಾನಿ ಸಾರ್ವಜನಿಕ ರ್‍ಯಾಲಿ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಭಾರೀ ಬಿಗಿಬಂದೋಬಸ್ತ್ ಮಾಡಲಾಗಿದೆ. ಹರಿಯಾಣದ ಜನರು ಭಾರತೀಯ ಜನತಾ ಪಕ್ಷಕ್ಕೆ ಪ್ರಚಂಡ ವಿಜಯ ಖಾತರಿಪಡಿಸಲು ಮನಸ್ಸು ಮಾಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಪೋಸ್ಟ್ ಹೇಳಿದ್ದಾರೆ. ಇಂದು ನಡೆಯುವ ರ್‍ಯಾಲಿಯಲ್ಲಿ ಜನರ ಆಶೀರ್ವಾದ ಪಡೆಯುವ ಭಾಗ್ಯ ಬಿಜೆಪಿಗೆ ಇದೆ ಎಂದು ಪ್ರಧಾನಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರ ಮೂರು ದಿನಗಳ ಅಮೆರಿಕ ಪ್ರವಾಸ ಅತ್ಯಂತ ಗಮನಾರ್ಹ ಹಾಗೂ ಪ್ರಭಾವಯುತ ಎಂದು ಹಲವು ಕೇಂದ್ರ ಸಚಿವರು ಹಾಗೂ ಎನ್‌ಡಿಎ ಮೈತ್ರಿಕೂಟದ ನಾಯಕರು ಬಣ್ಣಿಸಿದ್ದಾರೆ. ಈ ಭೇಟಿಯು ಪ್ರಧಾನಿ ನರೇಂದ್ರ ಮೋದಿ ಅವರ ರಾಜತಾಂತ್ರಿಕ ಸಿದ್ಧಾಂತವನ್ನು ಮತ್ತಷ್ಟು ಬಲಪಡಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಇದು ಕಳೆದ ಹತ್ತು ವರ್ಷಗಳಲ್ಲಿ ಭಾರತವನ್ನು ಸುಸ್ಥಿರ ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುವ

ಮೂಲಕ ಜಾಗತಿಕ ಬದಲಾವಣೆಯ ನಾಯಕನ ಪಾತ್ರವನ್ನು ಸಮರ್ಥವಾಗಿ ನಿಭಾಯಿಸಿದ್ದಾರೆ ಎಂದು ಹೇಳಿದ್ದಾರೆ. ಯಶಸ್ವಿ ಕ್ವಾಡ್ ಶೃಂಗಸಭೆ, ನರೇಂದ್ರ ಮೋದಿ ಹಾಗೂ ಅಮೆರಿಕದಲ್ಲಿನ ಭಾರತೀಯ ಸಮುದಾಯದ ಕಾರ್ಯಕ್ರಮ, ವಿಶ್ವಸಂಸ್ಥೆಯ ಶೃಂಗಸಭೆ, ಜಗತ್ತಿನೆಲ್ಲೆಡೆ ಅವರ ಸರಿಸಾಟಿಯಿಲ್ಲದ ಜನಪ್ರಿಯತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಅಮಿತ್ ಶಾ ವಿಶ್ಲೇಷಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವು, ಒಂದು ದೇಶವಾಗಿ ಭಾರತದ ಘನತೆಯನ್ನು ಹೆಚ್ಚಿಸಿದೆ. ಜೊತೆಗೆ ಪ್ರತಿಯೊಂದು ದೇಶವು ಮಾನವೀಯತೆಯ ಉನ್ನತಿಗಾಗಿ ಪಾಲುದಾರನಾಗಿ ಸ್ವೀಕರಿಸುತ್ತದೆ ಎಂದು ಹೇಳಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರೂ ಆಗಿರುವ ಕೇಂದ್ರ ಸಚಿವ ಜೆ.ಪಿ.ನಡ್ಡಾ, ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ ಪ್ರವಾಸವು ಪ್ರಮಾಣ ಹಾಗೂ ಫಲಿತಾಂಶಗಳ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದ್ದಾರೆ.  ಸುಮಾರು ೫೫ ಗಂಟೆಗಳಲ್ಲಿ ನರೇಂದ್ರ ಮೋದಿ ಅವರು, ಭಾರತ ಹಾಗೂ ವಿಶ್ವಕ್ಕೆ ಪ್ರಮುಖ ಅಂಶಗಳಲ್ಲಿ ಭಾರತದ ನಿಲುವನ್ನು ಖಚಿತಪಡಿಸುವ ಮೂಲಕ ಸಂದೇಶ ನೀಡಿದ್ದಾರೆ ಎಂದರು. ಜೆಡಿಯು ನಾಯಕರೂ ಆಗಿರುವ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್, ಅಮೆರಿಕ ಭೇಟಿ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಘೋಷಣೆಗಳ ಹಾಗೂ ಅವುಗಳಿಂದ ಸೃಷ್ಟಿಯಾಗಲಿರುವ ಹೊಸ ಅವಕಾಶಗಳ ಬಗ್ಗೆ ಬಿಹಾರದ ಜನರು ಅತ್ಯಂತ ಉತ್ಸುಕರಾಗಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಉಭಯ ದೇಶಗಳ ನಡುವಿನ ನಿರ್ಧಾರಗಳು ತಂತ್ರಜ್ಞಾನ ವಲಯದಲ್ಲಿ ಹೂಡಿಕೆಯನ್ನು ಹೆಚ್ಚಿಸಲಿದ್ದು, ಅಭಿವೃದ್ಧಿಯ ಹೊಸ ಮಾರ್ಗಗಳನ್ನು ತೆರೆಯಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ತೆಲುಗು ದೇಶಂ ಪಕ್ಷದ ನಾಯಕರೂ ಆಗಿರುವ ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ನರೇಂದ್ರ ಮೋದಿ ಅವರು, ರಾಷ್ಟ್ರಗಳ ಸಹಭಾಗಿತ್ವದಲ್ಲಿ ಭಾರತದ ಸ್ಥಾನವನ್ನು ಬಲಪಡಿಸಿದ್ದು, ಸಮುದಾಯಗಳು ಹಾಗೂ ರಾಷ್ಟ್ರಗಳನ್ನು ಒಗ್ಗೂಡಿಸಿ ಮುನ್ನಡೆಯುವ ಮೂಲಕ ಬಹು ಎತ್ತರದ ವಿಶ್ವ ನಾಯಕರಾಗಿ ಹೊರಹೊಮ್ಮಿದ್ದಾರೆ ಎಂದು ಹೇಳಿದ್ದಾರೆ. ವಿಶ್ವಸಂಸ್ಥೆಯನ್ನು ಉದ್ದೇಶಿಸಿ ನರೇಂದ್ರ ಮೋದಿ ಅವರು ಮಾಡಿದ ಭಾಷಣವು, ಜಾಗತಿಕ ನಾಯಕರು ಭಾರತದೊಂದಿಗೆ ಹೊಂದಿರುವ ಸಂಬಂಧದ ಮಹತ್ವ ಹಾಗೂ ಮುಂಬರುವ ವರ್ಷಗಳಲ್ಲಿ ಜಾಗತಿಕ ವೇದಿಕೆಯಲ್ಲಿ ಭಾರತ ವಹಿಸಲಿರುವ ಪಾತ್ರದ ಮಹತ್ವಕ್ಕೆ ಸಾಕ್ಷಿಯಾಗಲಿದೆ ಎಂದು ಹೇಳಿದ್ದಾರೆ. ಜೆಡಿಎಸ್ ನಾಯಕ, ಕೆಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಧಾನಿ ಅಮೆರಿಕ ಭೇಟಿಯ ವೇಳೆಯಲ್ಲಿ ಪರಮಾಣು ಇಂಧನ, ಗರ್ಭಕಂಠ ಕ್ಯಾನ್ಸರ್ ಲಸಿಕೆ, ಸೆಮಿಕಂಡಕ್ಟರ್‌ಗಳು, ಕೃತಕಬುದ್ಧಿಮತ್ತೆ, ಇಂಡೋ ಪೆಸಿಫಿಕ್ ಆರ್ಥಿಕ ಚೌಕಟ್ಟು, ಸಾಂಸ್ಕೃತಿಕ ಪರಂಪರೆಯ ಪುನರುಜ್ಜೀವನ ಸೇರಿದಂತೆ ಹಲವಾರು ವಿಷಯಗಳ ಬಗ್ಗೆ ವ್ಯವಹರಿಸಿದ್ದಾರೆ ಎಂದು ತಿಳಿಸಿದ್ದಾರೆ. ಶಿವಸೇನೆ ನಾಯಕ ಹಾಗೂ ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ, ನರೇಂದ್ರ ಮೋದಿ ಅವರು ಜಾಗತಿಕ ಮುತ್ಸದ್ಧಿ ಹಾಗೂ ಸರ್ವಶ್ರೇಷ್ಟ ರಾಜಕೀಯ ನಾಯಕ ಎಂಬುದನ್ನು ಅಮೆರಿಕ ಪ್ರವಾಸದಲ್ಲಿ ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. ತಂತ್ರಜ್ಞಾನ ಮತ್ತು ಉದ್ಯಮರಂಗದ ದಿಗ್ಗಜರೊಂದಿಗೆ ಪ್ರಧಾನಿಯವರ ಸಭೆಗಳನ್ನು ಶ್ಲಾಘಿಸಿದ್ದಾರೆ. ಎಲ್‌ಜೆಪಿ ನಾಯಕ, ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಪ್ರಧಾನಿಯವರ ಅಮೆರಿಕ ಭೇಟಿ ರಾಷ್ಟ್ರದ ಅಭಿವೃದ್ಧಿ ಹಾಗೂ ಜಾಗತಿಕ ರಾಜತಾಂತ್ರಿಕತೆಗೆ ಒಂದು ಮೈಲಿಗಲ್ಲು ಎಂದು ಬಣ್ಣಿಸಿದ್ದಾರೆ.

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಗ್ರೇಟರ್ ನೋಯಿಡಾದಲ್ಲಿ  ಉತ್ತರ ಪ್ರದೇಶ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನ-ಯುಪಿಐಟಿಎಸ್ ನ ಎರಡನೇ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ.  ಈ ಕಾರ್ಯಕ್ರಮ, ಉತ್ತರ ಪ್ರದೇಶದ ವ್ಯಾಪಾರ ಮತ್ತು ಸಂಸ್ಕೃತಿಯನ್ನು ಅನಾವರಣಗೊಳಿಸುವ  ಜೊತೆಗೆ ವಿಯೆಟ್ನಾಂ ಅನ್ನು ಪ್ರಮುಖ ಪಾಲುದಾರ ದೇಶವಾಗಿ ಗುರುತಿಸಲಿದೆ. ಐದು ದಿನಗಳ ಈ ವ್ಯಾಪಾರ ಪ್ರದರ್ಶನ ಇದೇ ೨೯ ರಂದು ಮುಕ್ತಾಯಗೊಳ್ಳಲಿದೆ.  ಯುಪಿಐಟಿಎಸ್ ನ ಮೊದಲ ಆವೃತ್ತಿಯನ್ನು ಅಧ್ಯಕ್ಷ ದ್ರೌಪದಿ ಮುರ್ಮು ಅವರು ಕಳೆದ ವರ್ಷ ಉದ್ಘಾಟಿಸಿದರು.

**<><*<><>*><>**

ಸಾರ್ವಜನಿಕ ಹಣಕಾಸು ಮತ್ತು ಲೆಕ್ಕ ವ್ಯವಸ್ಥೆಯನ್ನು ಪರಿಣಾಮಕಾರಿ ಹಾಗೂ ಸಕಾಲಿಕವಾಗಿ ನಿರ್ವಹಿಸುವಲ್ಲಿ ಭಾರತೀಯ ಕಂಟ್ರೋಲರ್ ಮತ್ತು ಆಡಿಟರ್ ಜನರಲ್ -ಸಿಎಜಿ ಬಹುಮುಖ್ಯ ಪಾತ್ರವಹಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.  ನವದೆಹಲಿಯಲ್ಲಿ ನಿನ್ನೆ ಸಿಎಜಿ ಆಯೋಜಿಸಿದ್ದ ೧೬ನೇ ಏಷ್ಯಾ ಸುಪ್ರೀಂ ಆಡಿಟ್ ಸಂಸ್ಥೆಗಳ ಒಕ್ಕೂಟದ ಸಮಾವೇಶ ಉದ್ದೇಶಿಸಿ ಅವರು, ಆಡಳಿತ ವ್ಯವಸ್ಥೆಯ ದಕ್ಷತೆ ಮತ್ತು ಗುಣಮಟ್ಟ ಉತ್ತಮಪಡಿಸುವಲ್ಲಿ ಆಡಿಟಿಂಗ್ ಪಾತ್ರ ಮಹತ್ವದ್ದು ಎಂದರು.  ಆಡಳಿತದಲ್ಲಿ ಪಾರದರ್ಶಕತೆ ಖಾತ್ರಿಪಡಿಸಲು ಹಾಗೂ ಸಾರ್ವಜನಿಕ ಲೆಕ್ಕದ ಬಗ್ಗೆ ಉತ್ತರದಾಯಿತ್ವವಾಗಿರಲು ಸಿಎಜಿ ಬಹುಮುಖ್ಯವಾಗಿದ್ದು, ಈ ಬಗ್ಗೆ ಸಂವಿಧಾನ ರಚನಾ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಹ ಉಲ್ಲೇಖಿಸಿದ್ದರು.  ಸಂವಿಧಾನ ರಚನಾ ಸಮಿತಿಯ ನಿರೀಕ್ಷೆಯಂತೆ  ಸಿಎಜಿ ನಿರಂತರವಾಗಿ ಉತ್ತಮ ಕಾರ್ಯ ನಿರ್ವಹಿಸುತ್ತಿದೆ ಎಂದು ರಾಷ್ಟ್ರಪತಿ ಶ್ಲಾಘಿಸಿದರು.  ಪ್ರಸ್ತುತ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆ, ಮಿಷನ್ ಲರ್ನಿಂಗ್, ಜಿಯೋ ಸ್ಪೇಷಿಯಲ್, ಡೇಟಾ ಬೇಸ್

ಮುಂತಾದ ತಂತ್ರಜ್ಞಾನ ಬಳಕೆಯ ಮೂಲಕ ಆಡಳಿತ ನಿರ್ವಹಣೆ ಹೆಚ್ಚು ಆಧುನಿಕಗೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಜನರಿಗೆ ತಂತ್ರಜ್ಞಾನ ಆಧಾರಿತ ಸೇವೆಗಳನ್ನು ಒದಗಿಸುವಲ್ಲಿ ಆಡಿಟಿಂಗ್ ಪಾತ್ರ ಮಹತ್ವದ್ದಾಗಿದೆ ಎಂದರು. ಭಾರತೀಯ ಆರ್ಥಿಕತೆ, ಡಿಜಿಟಲ್ ಆರ್ಥಿಕತೆಯತ್ತ ಪರಿವರ್ತನೆಯಾಗುತ್ತಿದ್ದು, ಇದಕ್ಕೆ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಆಡಿಪಾಯವಾಗಿದೆ. ಈ ಸ್ಥಿತ್ಯಂತರದಲ್ಲಿ ಸಿಎಜಿ ಪಾತ್ರ ಗಮನಾರ್ಹ ಎಂದರು.

**<><*<><>*><>**

ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುವ ಇಂಡಿಯಾ ಎಐ - ಸ್ವತಂತ್ರ ವ್ಯಾಪಾರ ವಿಭಾಗ, ಬಿ.ಟೆಕ್ ಹಾಗೂ ಎಂ.ಟೆಕ್ ವಿದ್ಯಾರ್ಥಿಗಳಿಂದ ಇಂಡಿಯಾ-ಎಐ ಫೆಲೋಶಿಪ್‌ಗಾಗಿ ನಾಮನಿರ್ದೇಶನಗಳನ್ನು ಆಹ್ವಾನಿಸಿದೆ. ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಸಂಶೋಧನೆ ನಡೆಸುವ ಹೊಸ ಪಿಎಚ್‌ಡಿ ವಿದ್ಯಾರ್ಥಿಗಳು ಇಂಡಿಯಾ-ಎಐ ಫೆಲೋಶಿಪ್‌ನಲ್ಲಿ ಭಾಗವಹಿಸಲು ತಮ್ಮ ಒಪ್ಪಿಗೆ ಸೂಚಿಸುವಂತೆ ರಾಷ್ಟ್ರೀಯ ಸಾಂಸ್ಥಿಕ ಶ್ರೇಯಾಂಕದ ಚೌಕಟ್ಟು ಪಟ್ಟಿ ಮಾಡಿರುವ ಅಗ್ರ ೫೦ ಸಂಶೋಧನಾ ಸಂಸ್ಥೆಗಳನ್ನು 'ಇಂಡಿಯಾ-ಎಐ' ಆಹ್ವಾನಿಸಿದೆ. ವಿದ್ಯಾರ್ಥಿಗಳು ತಮ್ಮ ನಾಮನಿರ್ದೇಶನಗಳನ್ನು **www.indiaai.gov.in** ನಲ್ಲಿ ಸಲ್ಲಿಸಬಹುದಾಗಿದ್ದು, ಇದೇ ೩೦ ಕೊನೆಯ ದಿನವಾಗಿರುತ್ತದೆ ಎಂದು ಇಂಡಿಯಾ-ಎಐ ತಿಳಿಸಿದೆ. ಇಂಡಿಯಾ-ಎಐ, ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಡಿಜಿಟಲ್ ಇಂಡಿಯಾ ಕಾರ್ಪೊರೇಶನ್ ಅಡಿಯಲ್ಲಿ, ಇಂಡಿಯಾ-ಎಐ ಮಿಷನ್‌ನ ಅನುಷ್ಠಾನ ಸಂಸ್ಥೆಯಾಗಿದೆ. ಇದು ಸಮಾಜದ ಎಲ್ಲಾ ಸ್ತರಗಳಲ್ಲಿ ಕೃತಕ ಬುದ್ಧಿಮತ್ತೆಯ ಪ್ರಯೋಜನಗಳನ್ನು ತಲುಪಿಸುವುದು, ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಭಾರತದ ಜಾಗತಿಕ ನಾಯಕತ್ವವನ್ನು ಹಾಗೂ ತಾಂತ್ರಿಕ ಸ್ವಾವಲಂಬನೆಯನ್ನು ಉತ್ತೇಜಿಸುವ ಜೊತೆಗೆ ಕೃತಕ ಬುದ್ಧಿಮತ್ತೆಯ ನೈತಿಕ ಮತ್ತು ಜವಾಬ್ದಾರಿಯುತ ಬಳಕೆಯನ್ನು ಖಚಿತಪಡಿಸುತ್ತದೆ.

**<><*<><>*><>**

'ಸ್ವಚ್ಛತಾ ಹೀ ಸೇವಾ' ಅಭಿಯಾನದಡಿ ಈವರೆಗೆ ಯೋಜಿತ ಪ್ರದೇಶಗಳ ಸ್ವಚ್ಛತಾ ಕಾರ್ಯ ಭರದಿಂದ ಸಾಗಿದೆ ಎಂದು ಕೇಂದ್ರ ವಸತಿ ಹಾಗೂ ನಗರಾಭಿವೃದ್ಧಿ ಸಚಿವಾಲಯ ತಿಳಿಸಿದೆ. ಐದು ಲಕ್ಷಕ್ಕೂ ಅಧಿಕ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಗಿದ್ದು, ಇದುವರೆಗೂ ಶೇಕಡ ೭೫ರಷ್ಟು ಪ್ರದೇಶಗಳನ್ನು ಶುಚಿಗೊಳಿಸಲಾಗಿದೆ. ಈ ಅಭಿಯಾನದಲ್ಲಿ ಮೂರು ಕೋಟಿಗೂ ಅಧಿಕ ಮಂದಿ ಕೈಜೋಡಿಸಿದ್ದಾರೆ ಎಂದು ಮಾಹಿತಿ ನೀಡಿದೆ. ದೇಶಾದ್ಯಂತ ಅಭಿಯಾನದಡಿ ನಾಲ್ಕು ಲಕ್ಷಕ್ಕೂ ಅಧಿಕ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯ ಮುಂದುವರಿದಿದ್ದು, ರಾಜ್ಯಗಳಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿವೆ ಎಂದು ಕೇಂದ್ರ ವಸತಿ ಹಾಗೂ ನಗರಾಭಿವೃದ್ಧಿ ಸಚಿವಾಲಯ ತಿಳಿಸಿದೆ.

**<><*<><>*><>**

ಚೀನಾದಲ್ಲಿ ನಡೆದ ಚೆಂಗ್ಡು ಓಪನ್ ಟೆನಿಸ್ ಚಾಂಪಿಯನ್‌ಶಿಪ್‌ನ ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಯು.ಕಿ.ಬಾಂಬ್ರಿ ಹಾಗೂ ಫ್ರೆಂಚ್‌ನ ಸಹಭಾಗಿ ಅಲ್ಬಾನೊ ವಲಿವೆಟ್ಟಿ ಜೋಡಿ ಫೈನಲ್‌ನಲ್ಲಿ ಪರಾಭವಗೊಂಡಿದೆ. ಭಾರತ-ಫ್ರೆಂಚ್ ಜೋಡಿ ಫೈನಲ್‌ನಲ್ಲಿ ಅಗ್ರ ಶ್ರೇಯಾಂಕಿತ ಫ್ರಾನ್ಸ್‌ನ ಸೆಡಿಯೊ ದೌಂಬಿಯಾ ಹಾಗೂ ಫಬಿಯನ್ ರೆಬೋಲ್ ಜೋಡಿಯ ವಿರುದ್ಧ ೪-೬, ೬-೪, ೪-೧೦ ಸೆಟ್‌ಗಳಿಂದ ಸೋಲೊಪ್ಪಿಕೊಂಡಿತು. ಪುರುಷರ ಡಬಲ್ಸ್ ಸೆಮಿಫೈನಲ್ಸ್‌ನಲ್ಲಿ ಭಾರತದ ಯೂಕಿ ಭಾಂಬ್ರಿ ಮತ್ತು ಫ್ರಾನ್ಸ್‌ನ ಅಲ್ಬಾನೊ ಒಲಿವೆಟ್ಟಿ ಅವರು ಎರಡನೇ ಶ್ರೇಯಾಂಕದ ಡಬಲ್ಸ್ ಜೋಡಿ ಇವಾನ್ ಡೋಡಿಗ್ ಮತ್ತು ರಾಫೆಲ್ ಮಾಟೋಸ್ ಅವರನ್ನು ೬-೩, ೭-೬, ೧೧-೯ ಸೆಟ್‌ಗಳಿಂದ ಸೋಲಿಸಿ, ಫೈನಲ್‌ಗೆ ಪ್ರವೇಶಿಸಿದ್ದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**